(ಕರ್ನಾಟಕ ಸರ್ಕಾರ
ಕಂದಾಯ ಇಲಾಖೆ)
**ಜಿಲ್ಲಾಧಿಕಾರಿಗಳ ಕಾರ್ಯಾಲಯ, ಮಂಡ್ಯ ಜಿಲ್ಲೆ, ಮಂಡ್ಯ**

Phone no: 08232 224600
& Fax no:-08232-221417
E-mail:-dcmandya09@gmail.com

ಸಂ: ಸಿಬ್ಬಂದಿ (1)248/2016–17

ದಿನಾಂಕ:16/09/2017

## –:ಅಧಿಕೃತ ಜ್ಞಾಪನ:–

**ವಿಷಯ:–** ಮಂಡ್ಯ ಜಿಲ್ಲಾ ಕಂದಾಯ ಘಟಕದಲ್ಲಿ ಖಾಲಿ ಇರುವ 100 ಗ್ರಾಮಲೆಕ್ಕಿಗರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಸಂಬಂಧದಲ್ಲಿ 1:5ರ ಅನುಪಾತದಲ್ಲಿ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸುವ ಕುರಿತು.

**ಉಲ್ಲೇಖ:–** ಈ ಕಛೇರಿಯ ಅಧಿಸೂಚನೆ ಸಿಬ್ಬಂದಿ(1) 248/2016–17, ದಿನಾಂಕ:20.03.2017.

@@@@@@

ಮಂಡ್ಯ ಜಿಲ್ಲಾ ಕಂದಾಯ ಘಟಕದಲ್ಲಿ ಖಾಲಿ ಇರುವ 100 ಗ್ರಾಮಲೆಕ್ಕಿಗರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಸಂಬಂಧದಲ್ಲಿ ಉಲ್ಲೇಖದ ರೀತ್ಯಾ ಅಧಿಸೂಚನೆ ಹೊರಡಿಸಿ, ಆನ್‌ಲೈನ್ ಮೂಲಕ ದಿನಾಂಕ:27.03.2017 ರಿಂದ ದಿನಾಂಕ:28.04.2017 ರವರೆಗೆ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿತ್ತು.

ಅಭ್ಯರ್ಥಿಗಳಿಂದ ಅರ್ಜಿಗಳು ಸ್ವೀಕೃತಗೊಂಡಿರುವ ಹಿನ್ನೆಲೆಯಲ್ಲಿ ಅಭ್ಯರ್ಥಿಗಳ ಮೆರಿಟ್ ಆಧಾರಿಸಿ, ವರ್ಗೀಕರಣ ಹಾಗೂ ಮೀಸಲಾತಿಯನ್ವಯ ಈ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ, 1:5ರ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಅಂತರ ಜಾಲದಲ್ಲಿ ಪ್ರಕಟಿಸಿದೆ. ಸದರಿ ತಾತ್ಕಾಲಿಕ ಆಯ್ಕೆ ಪಟ್ಟಿಯಿಂದ ಬಾಧಿತರಾದ ಅಭ್ಯರ್ಥಿಗಳು ಆಕ್ಷೇಪಣೆಗಳೇನಾದರೂ ಇದ್ದಲ್ಲಿ, ದಿನಾಂಕ:06.10.2017ರ ಸಂಜೆ. 5.30ರೊಳಗೆ ಪೂರಕ ದಾಖಲಾತಿಗಳೊಂದಿಗೆ ಅಧ್ಯಕ್ಷರು, ಗ್ರಾಮಲೆಕ್ಕಿಗರ ಆಯ್ಕೆ ಮತ್ತು ನೇರ ನೇಮಕಾತಿ ಪ್ರಾಧಿಕಾರ ಹಾಗೂ ಜಿಲ್ಲಾಧಿಕಾರಿಗಳು, ಮಂಡ್ಯ ಜಿಲ್ಲೆ , ಮಂಡ್ಯ ರವರಿಗೆ ಸಲ್ಲಿಸಲು ಸೂಚಿಸಿದೆ. ನಂತರ ಸ್ವೀಕೃತವಾದ ಆಕ್ಷೇಪಣೆಗಳನ್ನು ಪರಿಗಣಿಸುವುದಿಲ್ಲ.

ಸದರಿ ತಾತ್ಕಾಲಿಕ ಆಯ್ಕೆ ಪಟ್ಟಿಯಲ್ಲಿ ಸಾಮಾನ್ಯ ವರ್ಗದಡಿ ಆಯ್ಕೆಗೊಂಡಿರುವ ಅಭ್ಯರ್ಥಿಗಳು ದಿನಾಂಕ:09.10.2017 ಹಾಗೂ ಇತರೆ ವರ್ಗದಡಿ ಆಯ್ಕೆಗೊಂಡಿರುವ ಅಭ್ಯರ್ಥಿಗಳು ದಿನಾಂಕ:10.10.2017ರಂದು ಮೂಲ ದಾಖಲೆಗಳನ್ನು ಪರಿಶೀಲನೆಗಾಗಿ ಖುದ್ದು, ಮಂಡ್ಯ ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ನಿಮ್ಮನ್ನು ನೇಮಕಾತಿ ಪ್ರಕ್ರಿಯೆಯಿಂದ ಕೈ ಬಿಡಲಾಗುವುದು.

**ಷರತ್ತುಗಳು:–**

1. ಅಭ್ಯರ್ಥಿಗಳು, ಮೆರಿಟ್ ಹಾಗೂ ಮೀಸಲಾತಿಯನ್ವಯ ಒಂದಕ್ಕಿಂತ ಹೆಚ್ಚು ಕಡೆ ಆಯ್ಕೆಗೊಂಡಿದ್ದಲ್ಲಿ, ಅಂತಹ ಅಭ್ಯರ್ಥಿಗಳನ್ನು ಮೆರಿಟ್ ಆಧರಿಸಿ ನಿಯಮಾನುಸಾರ ಮೊದಲಿಗೆ ಸಾಮಾನ್ಯ ಅಭ್ಯರ್ಥಿಯಾಗಿ ಪರಿಗಣಿಸಲಾಗುವುದು, ಮೊದಲ ಆಯ್ಕೆ ನಂತರ ಸದರಿ ಅಭ್ಯರ್ಥಿಗಳನ್ನು ಉಳಿದ ಮೀಸಲಾತಿ ಆಯ್ಕೆ

ಪಟ್ಟಿಗಳಿಂದ ಕೈ ಬಿಡಲಾಗುವುದು. ಉಳಿದಂತೆ ನಂತರ ಅಭ್ಯರ್ಥಿಗಳನ್ನು ಮೆರಿಟ್ ಅನ್ವಯ ಅವರು ಕೋರಿರುವ ಮೀಸಲಾತಿಯಡಿ ಪರಿಗಣಿಸಲಾಗುವುದು.

2. ಸಾಮಾನ್ಯ ವರ್ಗದಡಿ ಆಯ್ಕೆಯಾಗಿರುವ ಅಭ್ಯರ್ಥಿಗಳು ದಿನಾಂಕ:09.10.2017 ರಂದು ದಾಖಲಾತಿ ಪರಿಶೀಲನೆಗೆ ಹಾಜರಾಗತಕ್ಕದ್ದು, ಅದೇ ಅಭ್ಯರ್ಥಿಯು ಇತರೆ ಮೀಸಲಾತಿಯಡಿ ಆಯ್ಕೆಯಾಗಿದ್ದಲ್ಲಿ ದಿನಾಂಕ:10.10.2017 ರಂದು ಹಾಜರಾಗುವ ಅವಶ್ಯಕತೆ ಇರುವುದಿಲ್ಲ.
3. 1:5ರ ಅನುಪಾತದಲ್ಲಿನ ಅಭ್ಯರ್ಥಿಗಳ ದಾಖಲಾತಿಯ ಪರಿಶೀಲನೆಯ ನಂತರ ನಿಗಧಿಪಡಿಸಿರುವ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳನ್ನು ನೇಮಿಸಿಕೊಳ್ಳಲಾಗುವುದು ಹಾಗೂ ಇನ್ನೂ ಶೇಕಡ 30ರಷ್ಟು ಹೆಚ್ಚುವರಿ ಅರ್ಹ ಅಭ್ಯರ್ಥಿಗಳನ್ನು ಪ್ರತ್ಯೇಕವಾಗಿ ಕಾಯ್ದಿರಿಸಿದ ಪಟ್ಟಿಯಲ್ಲಿ ಸೇರಿಸಿಕೊಳ್ಳಲಾಗುವುದು (Reserve list). ಒಂದು ವೇಳೆ ನೇಮಕಗೊಂಡ ಅಭ್ಯರ್ಥಿಗಳು ಕರ್ತವ್ಯಕ್ಕೆ ಹಾಜರಾಗದಿದ್ದಲ್ಲಿ ಅಂತಹ ಹುದ್ದೆಗಳನ್ನು ಶೇಕಡ 30ರಷ್ಟು ಕಾಯ್ದಿರಿಸಿಕೊಂಡಿರುವ ಪಟ್ಟಿ /ಅಭ್ಯರ್ಥಿಗಳಲ್ಲಿ ಮೆರಿಟ್ ಆಧಾರದಲ್ಲಿ ನಿಯಮಾನುಸಾರ ಆಯ್ಕೆ ಮಾಡಿಕೊಳ್ಳಲಾಗುವುದು.

Manjunath 16/9.

ಅಧ್ಯಕ್ಷರು,
ಗ್ರಾಮಲೆಕ್ಕಿಗರು ಆಯ್ಕೆ ಮತ್ತು ನೇರ ನೇಮಕಾತಿ ಪ್ರಾಧಿಕಾರ
ಹಾಗೂ ಜಿಲ್ಲಾಧಿಕಾರಿಗಳು, ಮಂಡ್ಯ ಜಿಲ್ಲೆ, ಮಂಡ್ಯ.

ಪ್ರತಿಯನ್ನು :– ಜಿಲ್ಲಾ ವಿಜ್ಞಾನ ಸೂಚಾನಾಧಿಕಾರಿ, ಮಂಡ್ಯ ರವರಿಗೆ, 1:5ರ ಅನುಪಾತ ತಾತ್ಕಾಲಿಕ ಪಟ್ಟಿಯನ್ನು ಇದರೊಂದಿಗೆ ಕಳುಹಿಸುತ್ತಾ, ವೆಬ್‌ಸೈಟ್ ನಲ್ಲಿ ಪ್ರಕಟಿಸುವ ಬಗ್ಗೆ ಕ್ರಮವಹಿಸಲು ಕೋರಿದೆ.